ಚಿಕ್ಕಮಂಗಳೂರು ಜಿಲ್ಲೆಯಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳು

೭೬೧. ಶ್ರೀಮತಿ ಮೋಟಮ್ಮ (ಮೂಡಿಗೆರೆ).—ಮಾನ್ಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.—

ಅ) ಚಿಕ್ಕಮಂಗಳೂರು ಜಿಲ್ಲೆಯಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು ?

ಆ) ಆ ಪೈಕಿ ಮೂಡಿಗೆರೆ ತಾಲ್ಲೂಕಿನಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು ?

ಇ) ಹಾಗಿದ್ದಲ್ಲಿ ಭರ್ತಿ ಮಾಡಲು ತೆಗೆದುಕೊಂಡ ಕ್ರಮಗಳೇನು ?

ಶ್ರೀ ಕೆ. ಹೆಚ್. ರಂಗನಾಥ್ (ಶಿಕ್ಷಣ ಸಚಿವರು).—

ಅ) ೪೮೪

ಆ) ೮೫

ಇ) ಈ ಹುದ್ದೆಗಳನ್ನು ಭರ್ತಿ ಮಾಡಲು ಶೀಘ್ರದಲ್ಲೇ ಕ್ರಮ ಕೈಗೊಳ್ಳಲಾಗುವುದು.

ಶಿವಮೊಗ್ಗ (ಗಾಂಧಿಪಾರ್ಕ್) ಅಭಿವೃದ್ಧಿ ಯೋಜನೆ

೪೩೭. ಶ್ರೀ ಕೆ. ಎಸ್. ಈಶ್ವರಪ್ಪ (ಶಿವಮೊಗ್ಗ).—ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಶಿವಮೊಗ್ಗ ನಗರಸಭೆಯ ಮಹಾತ್ಮಗಾಂಧಿ ಪಾರ್ಕಿನ ಬಗ್ಗೆ ಅಭಿವೃದ್ಧಿ ಯೋಜನೆ ತಯಾರಿಸಲಾಗಿದೆಯೇ ?

ಆ) ಹಾಗಿದ್ದಲ್ಲಿ ಈ ಯೋಜನೆಗೆ ಬೇಕಾಗುವ ಹಣವೆಷ್ಟು ?

ಇ) ಈ ಯೋಜನೆಯ ಕಾರ್ಯವನ್ನು ಯಾವಾಗ ಪ್ರಾರಂಭ ಮಾಡಲಾಗಿದೆ ?

ಶ್ರೀ ಟಿ. ಎನ್. ನರಸಿಂಹಮೂರ್ತಿ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು).—

ಅ) ಹೌದು.

ಆ) ರೂ. ೫.೦೦ ಲಕ್ಷ

ಇ) ೧೯೯೦ರ ಜೂನ್ ಮೊದಲನೆ ವಾರದಿಂದ ಆರಂಭಿಸಲಾಗಿದೆ.

ಮೂಡಿಗೆರೆ ತಾಲ್ಲೂಕಿಗೆ ಮಂಜೂರಾಗಿರುವ ಕೃಷಿ ಸಹಾಯಕರ ಹುದ್ದೆಗಳು

೪೩೬. ಶ್ರೀಮತಿ ಮೋಟಮ್ಮ (ಮೂಡಿಗೆರೆ).—ಮಾನ್ಯ ಕೃಷಿ ಮತ್ತು ತೋಟಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಮೂಡಿಗೆರೆ ತಾಲ್ಲೂಕಿಗೆ ಮಂಜೂರಾಗಿರುವ ಕೃಷಿ ಸಹಾಯಕರ ಹುದ್ದೆಗಳ ಸಂಖ್ಯೆ ಎಷ್ಟು?

ಆ) ಅವುಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ?

ಇ) ಖಾಲಿ ಇರುವ ಹುದ್ದೆಗಳನ್ನು ಭರ್ತಿಮಾಡಲು ತೆಗೆದುಕೊಳ್ಳಲಿರುವ ಕ್ರಮಗಳೇನು ?

ಶ್ರೀ ಎಸ್. ಬಂಗಾರಪ್ಪ (ಕೃಷಿ ಮತ್ತು ತೋಟಗಾರಿಕೆ ಸಚಿವರು).—

ಅ) ಮೂಡಿಗೆರೆ ತಾಲ್ಲೂಕಿಗೆ ೨೬ (ಇಪ್ಪತ್ತಾರು) ಕೃಷಿ ಸಹಾಯಕರ ಹುದ್ದೆಗಳು ಮಂಜೂರಾಗಿರುತ್ತವೆ.

ಆ) ಅವುಗಳಲ್ಲಿ ೯ ಹುದ್ದೆಗಳು ಖಾಲಿ ಇವೆ.

ಇ) ಸರ್ಕಾರದ ಆರ್ಥಿಕ ಮಿತವ್ಯಯ ಆದೇಶವನ್ನು ಸಡಿಲಿಸಿದನಂತರ ಸದರಿ ಖಾಲಿ ಹುದ್ದೆಗಳನ್ನು ಭರ್ತಿಮಾಡಲು ಕ್ರಮ ಕೈಗೊಳ್ಳಲಾಗುವುದು